ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು	ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1276
ಉತ್ತರಿಸಬೇಕಾದ ದಿನಾಂಕ	08.03.2022
ಉತ್ತರಿಸಬೇಕಾದ ಸಚಿವರು	ನಗರಾಭಿವೃದ್ಧಿ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ.	ಗದಗ, ಹಾವೇರಿ, ಧಾರವಾಡ ಗ್ರಾಮೀಣ ಜನರಿಗೆ ಮತ್ತು ಕುಂದಗೋಳ್ ಗದಗ ಪಟ್ಟಣದಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು. ಕೆ.ಯು.ಐ.ಡಿ.ಎಫ್.ಸಿ ವತಿಯಿಂದ ಏಷ್ಯಿಯನ್ ಅಭಿವೃದ್ಧಿ ಬ್ಯಾಂಕ್ ನೆರವಿನ ಉತ್ತರ ಕರ್ನಾಟಕ ನಗರ ವಲಯ ಬಂಡವಾಳ ಹೂಡಿಕಾ ಕಾರ್ಯಕ್ರಮ (ಎನ್‌ಕೆಯುಎಸ್‌ಐಪಿ) ದಡಿ ಗದಗ ನಗರಕ್ಕೆ ತುಂಗಭದ್ರಾ ನದಿ ಹಮ್ಮಿಗಿ ಬ್ಯಾರೇಜ್ ನಿಂದ ಪ್ರತಿದಿನ 35 ರಿಂದ 38 ಎಂ.ಎಲ್ ಸಗಟು ನೀರನ್ನು ಪಂಪು ಮಾಡಿ ಶುದ್ಧೀಕರಿಸಿ ನೀರು ಸರಬರಾಜು ಮಾಡಲಾಗುತ್ತಿದೆ.
ಆ.	ಹಾಗಿದ್ದಲ್ಲಿ ಗ್ರಾಮೀಣ ಭಾಗದ ಜನರಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)	**ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ ಕೈಗೊಂಡಿರುವ ಕ್ರಮ:** ಗದಗ ಜಿಲ್ಲೆಯ ಎಲ್ಲಾ ಗ್ರಾಮೀಣ ಜನವಸತಿಗಳಿಗೆ 2018 ರಿಂದ 2 ಸಮಗ್ರ ಡಿ.ಬಿ.ಓ.ಟಿ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳ ಮೂಲಕ ಕುಡಿಯುವ ನೀರನ್ನು ಒದಗಿಸಲಾಗುತ್ತಿದೆ. ಹಾವೇರಿ ಜಿಲ್ಲೆಯಲ್ಲಿ ಹಾಲಿಯಿರುವ ಯೋಜನೆಗಳಿಂದ ಒಟ್ಟು 237 ಜನವಸತಿಗಳಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲಾಗುತ್ತಿದೆ, ಉಳಿದ 493 ಗ್ರಾಮೀಣ ಜನವಸತಿಗಳಲ್ಲಿ ಸುಸ್ಥಿರ ಜಲಮೂಲಗಳು ಲಭ್ಯವಿಲ್ಲದೇ ಇರುವುದರಿಂದ, ಶಾಶ್ವತ ಕುಡಿಯುವ ನೀರಿನ ಪರಿಹಾರಕ್ಕಾಗಿ ಮೇಲ್ಮೈ ಜಲಮೂಲಗಳಿಂದ 3 ಹೊಸ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಗಳನ್ನು ಜೆ.ಜೆ.ಎಂ ಯೋಜನೆಯಡಿ ರೂಪಿಸಲಾಗಿದೆ. ಈ ಪೈಕಿ 2 ಯೋಜನೆಗಳು ಟೆಂಡರ್ ಪ್ರಕ್ರಿಯೆಯಲ್ಲಿದ್ದು, ಟೆಂಡರ್ ಅಂತಿಮಗೊಳಿಸಿ ಯೋಜನೆಯನ್ನು ಪ್ರಾರಂಭಿಸಲಾಗುವುದು. ಇನ್ನುಳಿದ 1 ಯೋಜನೆಯ PSR ತಯಾರಿಕೆ ಹಂತದಲ್ಲಿದ್ದು ಟೆಂಡರ್ ಮೂಲಕ ಗುತ್ತಿಗೆ ವಹಿಸಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು. ಧಾರವಾಡ ಜಿಲ್ಲೆಯ ಎಲ್ಲಾ ಗ್ರಾಮೀಣ ಭಾಗದ 388 ಜನವಸತಿಗಳಿಗೆ ಶುದ್ಧ ಕುಡಿಯುವ ನೀರಿನ ಸಮಸ್ಯೆ ನೀಗಿಸಲು ಜೆ.ಜೆ.ಎಂ ಯೋಜನೆಯಡಿ ಸಮಗ್ರ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು ರೂಪಿಸಿದ್ದು, ಪ್ರಸ್ತುತ ಟೆಂಡರ್ ಪ್ರಕ್ರಿಯೆಯಲ್ಲಿದ್ದು. ಟೆಂಡರ್ ಅಂತಿಮಗೊಳಿಸಿ ಯೋಜನೆಯನ್ನು ಪ್ರಾರಂಭಿಸಲಾಗುವುದು.

ಸಂಖ್ಯೆ: ನಅಇ 44 ಯುಎಂಎಸ್ 2022

(ಬಿ.ಎ.ಬಸವರಾಜ)
ನಗರಾಭಿವೃದ್ಧಿ ಸಚಿವರು
(ಬಿ.ಎ. ಬಸವರಾಜ)
ನಗರಾಭಿವೃದ್ಧಿ ಸಚಿವರು